ಮೈಸೂರ ಗೆಜೆಟ್

ಸರ್ಕಾರದಿಂದ ಘಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಜನವರೀ ತಾ|| 15, ಸ್ಯ 1887.

ಈ ಭಾಗವನ್ನು ಪ್ರತ್ಯೇಕ ಕೇರಿಸಿ ಇಡುವ ಬಗ್ಯೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯಗವರ್ಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್ರೀರು, ವಗ್ಯೆರೇರಿಂದ ಕೊಡೋಣ್ಣಾದ ಇಸ್ತಿಹಾರ್ನಾಮೆಗಳು.

ಫಿನ್ಯಾನ್ಷಿಯಲ್ ಇಲಾಖಾ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಯೆ, ಷರಾ ಬರೆಯಲ್ಪಡಬಹುದಾದಂಥಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್‌ನಲ್ಲಿ, ಸ್ಟ್ರಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕೌಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಯೆ ಅವರುಗಳೊಡನೆ ಮೈಸೂರು ಗವರ್ಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್‌ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಷ್ಟೇನ್‌ಮೆಂಟ್ ಯಾನೇ ಷರಾ ಬಗ್ಯೆ ಇದರಡಿ ರುಜಾ ಮಾಡಿರುವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಲಿಕೇಟಾದ ಡಿವಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಷ್ಟೇನ್‌ಮೆಂಟ್ ಬಗ್ಯೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡ್ಸನ್,
ಕಾಂಪ್ಟ್ರೋಲರ್.

ಅಂಬಕೇ ಇಲಾಖಾ.

ನಂ. 528—275. ತಾರೀಖು 6ನೇ ಜನವರೀ 1887.

ಇದರಿಂದ ಸಕಲ ಜನಗಳಿಗೂ ತಿಳಿಯುವ ಬಗ್ಯೆ ಪ್ರಕಟಿಸಲ್ಪಡುವದೇನಂದರೆ, ಮೈಸೂರ ಶ್ರೀಮ್ ಮಹಾರಾಜ ರಾಜಾಸಾಹೇಬ್ ಬಹದೂರವರ ದಿವಾರವರ ಅಪ್ಪಣೆ ಅನುಸರಿಸಿ ಚನ್ನಗಿರಿ ತಾಲ್ಲೂಕು ಹೊದಿಗೆರೆಯಲ್ಲಿ ಅಂಬಕೇ ಆಫೀಸ್ ಸ್ಥಾಪಿಸಲ್ಪಟ್ಟಿರುತ್ತೆ.

ಬಿ. ಮರಿಗಂಗಯ್ಯ,
ಅಂಬಕೇ ಬಕ್ಷಿ.